| Publication:E-Sanje | Date: Nov 24th, 2009 | Sub: Aasre |
|---|---|---|

# 6-8 ತಿಂಗಳಲ್ಲಿ ಗ್ರಾಮಗಳ ಸ್ಥಳಾಂತರ

ಬೆಂಗಳೂರು,ನ.23-ನೆರೆ ಪೀಡಿತ ಪ್ರದೇಶಗಳಲ್ಲಿ ಗ್ರಾಮಗಳ ಸ್ಥಳಾಂತರ ಹಾಗೂ ಪುನರ್ವಸತಿ ಪ್ರಕ್ರಿಯೆ ಇನ್ನು6-8 ತಿಂಗಳ ಒಳಗಾಗಿ ಪೂರ್ಣಗೊಳ್ಳಲಿದೆ ಎಂದು ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ವಿಶ್ವಾಸ ವ್ಯಕ್ತಪಡಿಸಿದ್ದಾರೆ.

ತಮ್ಮ ಗೃಹ ಕಚೇರಿ ಕೃಷ್ಣಾದಲ್ಲಿಂದು ನೆರೆ ಸಂತ್ರಸ್ತರಿಗೆ ವಸತಿ ನಿರ್ಮಾಣ ಯೋಜನೆಗೆ ಸಹಾಯ ಹಸ್ತ ನೀಡಿರುವ ದಾನಿಗಳ ಸಭೆ ನಡೆಸಿ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದರು.

ಆಸರೆ ಯೋಜನೆಯಡಿ ಸಂತ್ರಸ್ತರಿಗೆ ಮನೆ ನಿರ್ಮಿಸುವ ಪ್ರಕ್ರಿಯೆ ಈಗಾಗಲೇ ಚಾಲ್ತಿಯಲ್ಲಿದೆ. ಈ ಸಂಬಂಧ ಸಂಘ-ಸಂಸ್ಥೆಗಳು, ಉದ್ಯಮಗಳ ಪ್ರತಿನಿಧಿಗಳು ಸೇರಿದಂತೆ ವಿವಿಧ ದಾನಿಗಳೊಂದಿಗೆ ಚರ್ಚಿಸಿ ಅಭಿಪ್ರಾಯ ಸಂಗ್ರಹಿಸಲಾಯಿತು ಎಂದರು.

ನೆರೆ ಪೀಡಿತ ಪ್ರದೇಶಗಳಲ್ಲಿನ 360 ಗ್ರಾಮಗಳ ಸ್ಥಳಾಂತರ ಮಾಡುವ ಸಂಬಂಧ ಈಗಾಗಲೇ 200 ಗ್ರಾಮಗಳ ಸ್ಥಳಾಂತರಕ್ಕೆ ಭೂಮಿ ವಶಪಡಿಸಿಕೊಳ್ಳಲಾಗಿದೆ. ಬಾಕಿ ಗ್ರಾಮಗಳ ಸ್ಥಳಾಂತರಕ್ಕೆ ಒಂದು ವಾರದಲ್ಲಿ ಜಮೀನು ಗುರುತಿಸುವ ಪ್ರಕ್ರಿಯೆ ಪೂರ್ಣಗೊಳಿಸಿ ತಿಂಗಳೊಳಗಾಗಿ ಏಕಕಾಲಕ್ಕೆ ಗ್ರಾಮಗಳ ಪುನರ್ ನಿರ್ಮಾಣ ಕಾರ್ಯ ಆರಂಭಿಸುವುದಾಗಿ ಮುಖ್ಯಮಂತ್ರಿ ತಿಳಿಸಿದರು.

ಆಸರೆ ಯೋಜನೆಯಡಿ ಸಾರ್ವಜನಿಕ ಮತ್ತು ಖಾಸಗಿ ಸಹಭಾಗಿತ್ವದಲ್ಲಿ ಒಂದು ಲಕ್ಷ ಮನೆಗಳನ್ನು ನಿರ್ಮಿಸುವ ಗುರಿ ಸರ್ಕಾರಕ್ಕೆ ಇದ್ದು, ಈಗಾಗಲೇ 1.20 ಲಕ್ಷ ಮನೆಗಳನ್ನು ನಿರ್ಮಿಸಲು ಖಾಸಗಿ ಸಂಸ್ಥೆಗಳು, ಮಠಮಾನ್ಯಗಳು, ಉದ್ಯಮಿಗಳು ಮುಂದಾಗಿದ್ದಾರೆ ಎಂದರು.

ಸಂಗ್ರಹಿಸಲಾದ ದೇಣಿಗೆಯಿಂದ ಸ್ಥಳಾಂತರಗೊಂಡ ಗ್ರಾಮಗಳಲ್ಲಿ ರಸ್ತೆ, ಒಳಚರಂಡಿ ವ್ಯವಸ್ಥೆ ಸೇರಿದಂತೆ ಇನ್ನಿತರೆ ಮೂಲಸೌಲಭ್ಯಾಭಿವೃದ್ಧಿಗೆ ಕ್ರಮ ಕೈಗೊಳ್ಳಲಾಗುವುದು ಎಂದರು.

ಇದಲ್ಲದೆ, ಇಂದಿರಾ ಅವಾಜ್ ಯೋಜನೆಯಡಿ ಸುಮಾರು 2 ಲಕ್ಷ ಮನೆಗಳನ್ನು ನಿರ್ಮಿಸಲು ರಾಜ್ಯ ಸರ್ಕಾರ ಯೋಜನೆ ರೂಪಿಸುತ್ತಿದೆ. ಈ ಬಗ್ಗೆ ಕೇಂದ್ರ ಸರ್ಕಾರದ ಸಹಕಾರವನ್ನು ಕೋರಲಾಗಿದೆ ಎಂದು ಯಡಿಯೂರಪ್ಪ ತಿಳಿಸಿದರು.

ಸಭೆಯಲ್ಲಿ ಕಲ್ಯಾಣಿ ಗ್ರೂಪ್‌ನ ಅಧ್ಯಕ್ಷ ಬಾಬಾ ಕಲ್ಯಾಣಿ, ಬಯೋಕಾನ್ ರಾಣಿ, ಆದಿಚುಂಚನಗಿರಿ ಸಂಸ್ಥಾನದ ಪರವಾಗಿ ಶೇಖರ್ ಸ್ವಾಮಿ, ಮೈಸೂರು ಸಿಟಿಜನ್ ಫೋರಂನ ಭಟ್, ಸೇವಾ ಭಾರತೀಯ ದಿನೇಶ್ ಹೆಗಡೆ ಮತ್ತಿತರರು ಪಾಲ್ಗೊಂಡರು.



ನೆರೆ ಪೀಡಿತ ಪ್ರದೇಶಗಳಲ್ಲಿ ಗ್ರಾಮಗಳ ಸ್ಥಳಾಂತರ ಕುರಿತಂತೆ ಇಂದು ಉದ್ಯಮಿಗಳು ಹಾಗೂ ದಾನಿಗಳ ಜೊತೆ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಚರ್ಚೆ ನಡೆಸಿದರು. ಉದ್ಯಮಿ ಬಾಬಾಕಲ್ಯಾಣಿ, ಆದಿಚುಂಚನಗಿರಿ ಮಠದ ಪರವಾಗಿ ಶ್ರೀ ಶೇಖರಸ್ವಾಮಿ, ದಿನೇಶ್ ಹೆಗಡೆ, ರಾಣಿ ಮತ್ತಿತರರಿದ್ದರು.